ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT: ಚುನಾವಣೆ

ಪತ್ರಿಕೆಯ ಹೆಸರು : NAME OF THE NEWS PAPER: ವಿಶ್ವವಾಣಿ ದಿನಾಂಕ : DATE 6/12/19

# ರಾಜ್ಯಸಭೆಗೆ ಕೆ.ಸಿ.ರಾಮಮೂರ್ತಿ ಪುನರಾಯ್ಕೆ

ಬೆಂಗಳೂರು: ರಾಜ್ಯಸಭೆಯ ಉಪಚುನಾವಣೆಯಲ್ಲಿ ಬಿಜೆಪಿ ಅಭ್ಯರ್ಥಿ ಕೆ.ಸಿ.ರಾಮಮೂರ್ತಿ ಗುರುವಾರ ಅವಿರೋಧವಾಗಿ ಆಯ್ಕೆ ಆಗಿದ್ದಾರೆ. ಇತರ ಇಬ್ಬರು ಅಭ್ಯರ್ಥಿಗಳು ಸಲ್ಲಿಸಿದ್ದ ನಾಮಪತ್ರಗಳು ಸೂಚಕರಿಲ್ಲದೆ ತಿರಸ್ಕೃತಗೊಂಡಿದ್ದವು. ನಾಮಪತ್ರ ವಾಪಸ್ ಪಡೆಯಲು ಗುರುವಾರ ಕೊನೆಯ ದಿನವಾಗಿತ್ತು. ರಾಮಮೂರ್ತಿ ಅವರೊಬ್ಬರೇ ಕಣದಲ್ಲಿ ಉಳಿದಿದ್ದರಿಂದ ಅವಿರೋಧವಾಗಿ ಆಯ್ಕೆ ಆಗಿದ್ದಾರೆ ಎಂದು ಚುನಾವಣೆ ಅಧಿಕಾರಿಯಾದ ವಿಧಾನಸಭೆ ಕಾರ್ಯದರ್ಶಿ ಎಂ.ಕೆ.ವಿಶಾಲಾಕ್ಷಿ ಪ್ರಕಟಿಸಿದರು.

ವಿಧಾನಸಭೆಯಲ್ಲಿ ಸಂಖ್ಯಾಬಲದ ಕೊರತೆಯಿಂದಾಗಿ ಕಾಂಗ್ರೆಸ್, ಜೆಡಿಎಸ್ ತನ್ನ ಅಭ್ಯರ್ಥಿಯನ್ನು ಕಣಕ್ಕೆ ಇಳಿಸಿರಲಿಲ್ಲ. ಹಾಗಾಗಿ ಅವಿರೋಧ ಆಯ್ಕೆಗೆ ದಾರಿ ಸುಗಮವಾಗಿತ್ತು.

2016ರಲ್ಲಿ ಕಾಂಗ್ರೆಸ್‌ನಿಂದ ರಾಜ್ಯಸಭೆಗೆ ಆಯ್ಕೆಯಾಗಿದ್ದ ಕೆ.ಸಿ.ರಾಮಮೂರ್ತಿ ಇತ್ತೀಚೆಗೆ ರಾಜೀನಾಮೆ ನೀಡಿದ್ದ ಹಿನ್ನೆಲೆಯಲ್ಲಿ ಉಪಚುನಾವಣೆ ಎದುರಾಗಿತ್ತು. ಪಕ್ಷಕ್ಕೂ ರಾಜೀನಾಮೆ ನೀಡಿ ಹೊರಬಂದಿದ್ದ ಅವರು ನಂತರ ಬಿಜೆಪಿಗೆ ಸೇರಿದ್ದರು. ಬಿಜೆಪಿ ವರಿಷ್ಠರು ಅವರನ್ನೇ ಕಣಕ್ಕಿಳಿದಿದ್ದರು. ಇವರ ಅಧಿಕಾರ ಅವಧಿ 2022 ಜೂನ್ 30ರವರೆಗೆ ಇದೆ.

> ರಾಜ್ಯದ ಅಭಿವೃದ್ಧಿಗೆ ಶ್ರಮಿಸುತ್ತೇನೆ. ಪ್ರಧಾನಿ ನರೇಂದ್ರ ಮೋದಿ ಅವರ ಕಾರ್ಯಕ್ರಮಗಳಿಂದ ಪ್ರೇರಿತನಾಗಿ ಬಿಜೆಪಿ ಸೇರಿದೆ. ಈ ಮೊದಲು ಬಿಜೆಪಿ ಸ್ನೇಹಿತರ ಜತೆಗೆ ಒಡನಾಟ ಚೆನ್ನಾಗಿತ್ತು. ಇನ್ಮುಂದೆ ಅವರ ಜತೆಯಲ್ಲಿ ಸೇರಿ ಅಭಿವೃದ್ಧಿ ಕೆಲಸ ಮಾಡುತ್ತೇನೆ. ಪಕ್ಷ ಬಿಡುವಾಗ ಶಾಸಕ ಡಿ.ಕೆ.ಶಿವಕುಮಾರ್ ಅವರಿಗೆ ಹೇಳಬೇಕು ಎಂದೇನಿಲ್ಲ. ಈಗ ಅವರಿಗೆ ಎಲ್ಲವೂ ಗೊತ್ತಾಗಿರುತ್ತದೆ.
>
> ಕೆ.ಸಿ.ರಾಮಮೂರ್ತಿ, ರಾಜ್ಯಸಭಾ ಸದಸ್ಯ



ರಾಜ್ಯಸಭೆಗೆ ಕೆ.ಸಿ. ರಾಮಮೂರ್ತಿ ಅವರು ಪುನರಾಯ್ಕೆಯಾಗಿದ್ದು ವಿಧಾನಸಭೆಯ ಕಾರ್ಯದರ್ಶಿ ಎಂ.ಕೆ ವಿಶಾಲಾಕ್ಷಿ ಅವಿರೋಧ ಆಯ್ಕೆಯನ್ನು ಘೋಷಿಸಿ, ಪ್ರಮಾಣ ಪತ್ರ ನೀಡಿದರು. ಈ ವೇಳೆ ಮುಖ್ಯ ಮಂತ್ರಿ ರಾಜಕೀಯ ಕಾರ್ಯದರ್ಶಿ ಎಸ್.ಆರ್.ವಿಶ್ವನಾಥ್, ರಾಜ್ಯ ಬಿಜೆಪಿ ಮಾಧ್ಯಮ ಸಂಚಾಲಕ ಎ.ಎಚ್.ಆನಂದ್ ಉಪಸ್ಥಿತರಿದ್ದು, ಅಭಿನಂದಿಸಿದರು.

1